ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಶಿಕ್ಷಣಾ ವ್ಯವಸ್ಥೆ ಸ್ಥಿರ ನಿರ್ಧಾರ ಶಿಕ್ಷಣಮಟ್ಟ ಮತ್ತು ನೂತನ ಶಿಕ್ಷಣ ನೀತಿ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

98 (138) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಈಗಿನ ಆಂಗ್ಲ ಮಾದರಿ ಶಿಕ್ಷಣ ವ್ಯವಸ್ಥೆ ಸ್ಥಿರ ನಿರ್ಧಾರ ಮತ್ತು ವ್ಯವಸ್ಥಿತ ರೀತಿಯಲ್ಲಿ ನಡೆಯುತ್ತಿದ್ದು, ಪೋಷಕರು ಮತ್ತು ಸರ್ಕಾರದ ವ್ಯವಸ್ಥೆಗಳ ನಡುವೆ ಮಕ್ಕಳ ಶಿಕ್ಷಣ ಮತ್ತು ಬೌದ್ಧಿಕ ಮಟ್ಟ ಕೆಳಗಿಳಿಯುತ್ತಿರುವ ಕುರಿತು ಸರ್ಕಾರದ ನಿಲುವೇನು;

(ಆ) ಇತ್ತೀಚಿನ ದಿನಗಳಲ್ಲಿ ಮಕ್ಕಳ ಶಿಕ್ಷಣದ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಶಿಕ್ಷಣ ಮಟ್ಟ ಎತ್ತರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಮಾಹಿತಿ ಒದಗಿಸುವುದು)

(ಈ) ಕೇಂದ್ರ ಸರ್ಕಾರದ ನೂತನ ಶಿಕ್ಷಣ ನೀತಿ ಜಾರಿಗೊಳಿಸುವ ವಿಚಾರ ಸರ್ಕಾರದ ಮುಂದಿದೆಯೇ ; ಇದರ ಕುರಿತು ಉನ್ನತ ಸಮಿತಿ ನೇಮಿಸಲಾಗಿದೆಯೇ ; (ವಿವರ ಒದಗಿಸುವುದು)

(ಉ) ಶಿಕ್ಷಣದ ವಿಷಯದಲ್ಲಿ ಸರ್ಕಾರದ ನಿಲುವೇನು ; "ಯಾವುದು ಗುಣಮಟ್ಟದ ಶಿಕ್ಷಣ"ಎನ್ನುವುದಕ್ಕೆಸರ್ಕಾರ ನೀಡುವವ್ಯಾಖ್ಯಾನವೇನು?